## ಕರ್ನಾಟಕ ಲೋಕಾಯುಕ್ತ

ನಂ. ಕಂಪ್ಲೆಂಟ್/ಉಪಲೋಕ್/ಬಿಜಿಎಂ/2304/2021
ಮಂಡನಾಧಿಕಾರಿಗಳ ಶಾಖೆ, ಪಿ.ಒ. ಎ.ಆರ್.ಇ.17

ಬಹುಮಹಡಿಗಳ ಕಟ್ಟಡ,
ಡಾ: ಅಂಬೇಡ್ಕರ್ ವೀದಿ,ಬೆಂಗಳೂರು,
ದಿನಾಂಕ: 31/01/2022

### ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3)ರ ಅನ್ವಯ ವರದಿ

*****

ವಿಷಯ: ಸರ್ಕಾರಿ ನೌಕರರಾದ ಶ್ರೀ ಸಾಗರ ಬಿನ್ ನಾನು ರಾಥೋಡ್, ಗ್ರಾಮಲೆಕ್ಕಾಧಿಕಾರಿ, ಚಿಂಚುಕಟ್ಟಿ ಗ್ರಾಮ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಬಗ್ಗೆ.

*****

1) ಪೋಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಉತ್ತರ ವಲಯ, ಬೆಳಗಾವಿ ಇವರು ಬಾಗಲಕೋಟೆ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹ ದಳ ಪೋಲೀಸ್ ಠಾಣೆಯ ಪೋಲೀಸ್ ನಿರೀಕ್ಷಕರು (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ) ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ ವರದಿಯಲ್ಲಿ ಶ್ರೀ ಸಾಗರ ಬಿನ್ ನಾನು ರಾಥೋಡ್, ಗ್ರಾಮಲೆಕ್ಕಾಧಿಕಾರಿ, ಚಿಂಚುಕಟ್ಟಿ ಗ್ರಾಮ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ಶ್ರೀ ದುರಗಪ್ಪ ತಂದೆ ದುರಗಪ್ಪ ವಡ್ಡರ, ಸಾ: ಚಿಂಚಲಕಟ್ಟಿ ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಎದುರುದಾರರನ್ನು ಭೇಟಿ ಮಾಡಿದಾಗ ಲಂಚದ ಹಣಕ್ಕೆ ಬೇಡಿಕೆ ಇಟ್ಟು, ಅದನ್ನು ಪಡೆದು ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 7(2) ರನ್ವಯ ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

2) **ದೂರಿನ ಸಂಕ್ಷಿಪ್ತ ವಿವರಣೆ:-** ದೂರುದಾರರ ತಂದೆಯವರು ಜಮೀನು ಪಾಲು ಮಾಡುವ ಸಲುವಾಗಿ ಎದುರುದಾರರಿಗೆ ಅರ್ಜಿ ಸಲ್ಲಿಸಿದ್ದು, ಈ ಬಗ್ಗೆ ತಕರಾರು ಸಲ್ಲಿಕೆಯಾಗಿದ್ದರಿಂದ ತಹಶೀಲ್ದಾರ್ ಬಾದಾಮಿಯವರ ನ್ಯಾಯಾಲಯದಲ್ಲಿ ಆರ್. ಟಿ. ಎಸ್. ಪ್ರಕರಣ ದಾಖಲಾಗಿದ್ದು, ತದನಂತರ ದೂರುದಾರರ ತಂದೆ ಮೃತರಾದ ಪ್ರಯುಕ್ತ ತಹಶೀಲ್ದಾರ್‌ರವರ ನ್ಯಾಯಾಲಯಕ್ಕೆ ವಂಶಾವಳಿ ಮಾಹಿತಿಯನ್ನು ಹಾಜರುಪಡಿಸಬೇಕಾಗಿದ್ದರಿಂದ ಸದರಿ ವಂಶಾವಳಿ ಫಾರ್ಮ್ ಮೇಲೆ ಎದುರುದಾರರು

ಸಹಿ ಮಾಡಿ ಕೊಡಲು 1,000/- ರೂ. ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ. ಸದರಿ ಲಂಚದ ಹಣ ನೀಡಲು ಇಷ್ಟವಿಲ್ಲದ ಕಾರಣ, ದೂರುದಾರರು ಬಾಗಲಕೋಟೆ ಜಿಲ್ಲೆ ಎ.ಸಿ.ಬಿ. ಪೊಲೀಸ್ ಠಾಣೆಗೆ ರೆಕಾರ್ಡ್ ಮಾಡಿದ ಸಂಭಾಷಣೆಯೊಂದಿಗೆ ದೂರನ್ನು ದಿನಾಂಕ 30/01/2020 ರಂದು ನೀಡಿರುತ್ತಾರೆ. ಈ ಬಗ್ಗೆ ಬಾಗಲಕೋಟೆ ಎ.ಸಿ.ಬಿ. ಠಾಣೆಯ ಅಧಿಕಾರಿಗಳು ದೂರನ್ನು ಪಡೆದು ತಮ್ಮ ಠಾಣೆಯ ಗುನ್ನೆ ನಂ. 01/2020 ರಲ್ಲಿ ಪ್ರಕರಣ ನೋಂದಾಯಿಸಿಕೊಂಡಿರುತ್ತಾರೆ.

3) ತನಿಖಾಧಿಕಾರಿಗಳು ದಿನಾಂಕ 30/01/2020 ರಂದು ನೆರಳು ಸಾಕ್ಷಿ ಹಾಗೂ ಸಹ ಪಂಚರನ್ನು ಬರ ಮಾಡಿಕೊಂಡು ದೂರುದಾರರನ್ನು ಪರಿಚಯಿಸಿ, ಅವರಿಂದ ದೂರಿನ ವಿಷಯವನ್ನು ತಿಳಿದ ನಂತರ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿದ ಸಂಭಾಷಣೆಯನ್ನು ಸಿ.ಡಿ.ಗೆ ವರ್ಗಾಯಿಸಿಕೊಂಡು ದೂರನ್ನು ಸಲ್ಲಿಸಿದ್ದು, ಸದರಿ ಸಿ.ಡಿ.ಯನ್ನು ಪಂಚರಿಗೆ ಕೇಳಿಸಿ, ಲಿಪೀಕರಣ ಮಾಡಿ ವಶಪಡಿಸಿಕೊಂಡಿರುತ್ತಾರೆ. ನಂತರ ಲಂಚದ ಹಣ 1,000/- ರೂಪಾಯಿಗಳನ್ನು ದೂರುದಾರರು ಹಾಜರುಪಡಿಸಿದ್ದು, ಅವುಗಳ ಮುಖಬೆಲೆ ಮತ್ತು ನೋಟಿನ ಸಂಖ್ಯೆ ಪ್ರತ್ಯೇಕ ಹಾಳೆಯಲ್ಲಿ ನಮೂದಿಸಿ ಪಂಚರ ಮತ್ತು ತನಿಖಾಧಿಕಾರಿಗಳ ಸಹಿ ಪಡೆದುಕೊಂಡಿರುತ್ತಾರೆ. ಸದರಿ ಹಣಕ್ಕೆ ಪಿನಾಫ್ತಲಿನ್ ಪೌಡರ್ ಲೇಪಿಸಿ ಸೋಡಿಯಂ ಕಾರ್ಬೋನೇಟ್ ದ್ರಾವಣ ತಯಾರಿಸಿ, ನೋಟುಗಳಿಗೆ ಪಿನಾಫ್ತಲಿನ್ ಪೌಡರ್ ಲೇಪಿಸಿದ ಪಂಚನ ಕೈ ಬೆರಳುಗಳನ್ನು ಸದರಿ ದ್ರಾವಣದಲ್ಲಿ ಅದ್ದಿ ತೆಗೆದಾಗ ಅದು ತಿಳಿ ಗುಲಾಬಿ ಬಣ್ಣಕ್ಕೆ ಬಂದಿರುತ್ತದೆ. ಈ ಬಗ್ಗೆ ಮಾದರಿ ದ್ರಾವಣ ಹಾಗೂ ಗುಲಾಬಿ ಬಣ್ಣಕ್ಕೆ ತಿರುಗಿದ ದ್ರಾವಣಗಳನ್ನು ಪ್ರತ್ಯೇಕವಾಗಿ ವಶಪಡಿಸಿಕೊಂಡು ಹಂತ ಹಂತವಾಗಿ ಫೋಟೋಗಳನ್ನು ತೆಗೆಸಿ, ಪ್ರಕರಣದ ಮಾಹಿತಿ ಗೌಪ್ಯತೆಯನ್ನು ಕಾಪಾಡಿಕೊಳ್ಳಲು ತನಿಖಾಧಿಕಾರಿಯವರು ಸೂಚಿಸಿರುತ್ತಾರೆ. ಶ್ರೀ ಸುರೇಶ ಶಂಕ್ರಪ್ಪ ಚಳಗೇರಿ, ಪ್ರ.ದ.ಸ. ಅಧೀಕ್ಷಕ ಅಭಿಯಂತರರ ಕಛೇರಿ, ಬಾಗಲಕೋಟೆ ಇವರನ್ನು ನೆರಳು ಸಾಕ್ಷಿಯಾಗಿ ನೇಮಿಸಿ, ದೂರುದಾರರೊಂದಿಗೆ ಎದುರುದಾರರ ಬಳಿ ಹೋಗಿ ಅವರಿಗೆ ಅನುಮಾನ ಬಾರದಂತೆ ಮತ್ತು ಎದುರುದಾರರು ಹಾಗೂ ದೂರುದಾರರ ನಡುವೆ ನಡೆದ ಸಂಭಾಷಣೆಯನ್ನು ಕೇಳಿಸಿಕೊಂಡು ಘಟನೆಯನ್ನು ವೀಕ್ಷಿಸಿ, ಎದುರುದಾರರು ಹಣವನ್ನು ಕೇಳಿ ಪಡೆದುಕೊಂಡರೆ, ಹಣವನ್ನು ಹೇಗೆ ಪಡೆದುಕೊಳ್ಳುತ್ತಾರೆ, ಹಣವನ್ನು ಎಲ್ಲಿ ಇಟ್ಟುಕೊಳ್ಳುತ್ತಾರೆ ಎಂಬುದನ್ನು ಗಮನಿಸಿ ನಂತರ ತಿಳಿಸಬೇಕೆಂದು ತನಿಖಾಧಿಕಾರಿಯವರು ತಿಳಿಸಿರುತ್ತಾರೆ. ದೂರುದಾರರಿಗೆ

ವಾಯ್ಸ್ ರೆಕಾರ್ಡರ್‌ನಲ್ಲಿ ಸಂಭಾಷಣೆಯನ್ನು ರೆಕಾರ್ಡ್ ಮಾಡುವಂತೆ ಸೂಚಿಸಿರುತ್ತಾರೆ. ದೂರುದಾರರಿಗೆ ಎದುರುದಾರರು ಲಂಚದ ಹಣ ಬೇಡಿಕೆ ಇಟ್ಟು ಸ್ವೀಕರಿಸಿದ ನಂತರ ತನ್ನ ತಲೆಯ ಮೇಲೆ ಕೈ ಆಡಿಸುವುದರ ಮೂಲಕ ಸಂಜ್ಞೆ ನೀಡಬೇಕೆಂದು ತಿಳಿಸಿರುತ್ತಾರೆ. ಈ ಬಗ್ಗೆ ಸವಿಸ್ತಾರ ಪ್ರಾಯೋಗಿಕ ಪಂಚನಾಮೆಯನ್ನು ನಿರ್ವಹಿಸಿರುತ್ತಾರೆ.

4) ದಿನಾಂಕ 30/01/2020 ರಂದು ಕೆರೂರ ನಾಡ ಕಛೇರಿಯ ಕಂದಾಯ ನಿರೀಕ್ಷಕರ ಕೊಠಡಿಯಲ್ಲಿ ದೂರುದಾರರ ಜೊತೆ ನೆರಳು ಸಾಕ್ಷಿ ಶ್ರೀ ಸುರೇಶ ಶಂಕ್ರಪ್ಪ ಚಳಗೇರಿ, ಪ್ರ.ದ.ಸ. ಅಧೀಕ್ಷಕ ಅಭಿಯಂತರರ ಕಛೇರಿ, ಬಾಗಲಕೋಟೆ ಇವರ ಸಮಕ್ಷಮ ಎದುರುದಾರರು ದೂರುದಾರರಿಗೆ ಲಂಚದ ಹಣಕ್ಕೆ ಬೇಡಿಕೆ ಇಟ್ಟು ಪಿನಾಪ್ತಲಿನ್ ಪೌಡರ್ ಲೇಪಿತ 1,000/- ರೂ. ಲಂಚದ ಹಣವನ್ನು ಎದುರುದಾರರು ಅಲ್ಲಿಯೇ ಇದ್ದ ಹಲಗೇರಿ ಗ್ರಾಮದ ವ್ಯಕ್ತಿಯೊಬ್ಬರ ಬಳಿ ಕೊಡಲು ತಿಳಿಸಿದ್ದು, ಸದರಿ ವ್ಯಕ್ತಿಯು ಹಣ ಸ್ವೀಕರಿಸದ ಕಾರಣ ಕೊನೆಗೆ ಎದುರುದಾರರೇ ಎರಡೂ ಕೈಗಳಿಂದ ಪಿನಾಪ್ತಲಿನ್ ಪೌಡರ್ ಲೇಪಿತ 1,000/- ರೂ. ಲಂಚದ ಹಣವನ್ನು ತೆಗೆದುಕೊಂಡು ಎರಡೂ ಕೈಗಳಿಂದ ಎಣಿಸಿ ಪ್ಯಾಂಟಿನ ಬಲಗಡೆ ಹಿಂದಿನ ಜೇಬಿನಲ್ಲಿ ಇಟ್ಟುಕೊಂಡು ವಂಶಾವಳಿ ಫಾರ್ಮ ಮೇಲೆ ಸಹಿ ಮಾಡಿ ದೂರುದಾರರಿಗೆ ನೀಡಿರುತ್ತಾರೆ. ನಂತರ ದೂರುದಾರರು ಕಛೇರಿಯಿಂದ ಹೊರ ಬಂದು ತಲೆಯ ಮೇಲೆ ಕೈ ಆಡಿಸುವುದರ ಮೂಲಕ ತನಿಖಾಧಿಕಾರಿಗಳಿಗೆ ನಿಗದಿತ ಸಿಗ್ನಲ್ ನೀಡಿರುತ್ತಾರೆ. ತನಿಖಾಧಿಕಾರಿಯವರು ಪಂಚರ ಸಮಕ್ಷಮ ಸದರಿ ಲಂಚದ ಹಣವಾದ 1,000/- ರೂ.ಗಳನ್ನು ಎದುರುದಾರರಿಂದ ಅಮಾನತ್ತು ಪಡಿಸಿಕೊಂಡಿರುತ್ತಾರೆ. ತನಿಖಾಧಿಕಾರಿಯವರು ಎದುರುದಾರರ ಬಲಗೈ ಬೆರಳುಗಳನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ಅದೇ ರೀತಿ ಎದುರುದಾರರ ಎಡಗೈ ಬೆರಳುಗಳನ್ನು ಇನ್ನೊಂದು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ನಂತರ ತನಿಖಾಧಿಕಾರಿಗಳು ಎದುರುದಾರರಿಗೆ ಬದಲಿ ಪ್ಯಾಂಟಿನ ವ್ಯವಸ್ಥೆಯನ್ನು ಮಾಡಿ ಎದುರುದಾರರ ಪ್ಯಾಂಟನ್ನು ಬಿಚ್ಚಿಸಿಕೊಂಡು ಪ್ಯಾಂಟಿನ ಎಡಭಾಗದ ಜೇಬನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ನಂತರ

ಸದರಿ ದ್ರಾವಣಗಳನ್ನು ಹಾಗೂ ಪ್ಯಾಂಟನ್ನು ಪಂಚರ ಸಮಕ್ಷಮ ಅಮಾನತ್ ಪಡಿಸಿಕೊಂಡಿರುತ್ತಾರೆ. ದೂರುದಾರರು ಪಂಚ ಸಾಕ್ಷಿಗಳು, ಸಿಬ್ಬಂಧಿಯವರೊಂದಿಗೆ ತನಿಖಾಧಿಕಾರಿಗಳು, ನೆರಳು ಸಾಕ್ಷಿ ಶ್ರೀ ಸುರೇಶ ಸಂಕ್ರಪ್ಪ ಚಳಗೇರಿ, ಸಹ ಪಂಚ ಅವರಿಂದ ಅಲ್ಲಿಯ ನಡವಳಿಕೆಗಳನ್ನು ತಿಳಿದು ಸವಿಸ್ತಾರ ಜಪ್ತಿ ಪಂಚನಾಮೆ ನಿರ್ವಹಿಸಿ, ದೂರುದಾರರ ಹಾಗೂ ಪಂಚರ ಸಮಕ್ಷಮ ಸದರಿ ಹಣವನ್ನು ತನಿಖಾಧಿಕಾರಿಗಳು ವಶಪಡಿಸಿಕೊಂಡಿರುತ್ತಾರೆ.

5) ಸದರಿ ಹಣದ ಬಗ್ಗೆ ತನಿಖಾಧಿಕಾರಿಯವರು ಎದುರುದಾರರನ್ನು ವಿಚಾರಿಸಿದಾಗ "ನನಗೆ ದುಡ್ಡು ಬೇಡ ಅಂದರೂ ನನ್ನ ಆಫೀಸಿನ ಕೆಲಸ ಮಾಡುತ್ತಿದ್ದಾಗ ನನ್ನ ಹತ್ತಿರ ಬಂದು ಟೇಬಲ್ ಮೇಲೆ ದುಡ್ಡು ಇಟ್ಟು ಹೋಗಿದ್ದಾರೆ. ಬೇಡ ಅಂದರೂ ದುಡ್ಡು ಇಟ್ಟು ಹೋಗಿದ್ದಾರೆ" ಎಂದು ಸಮಜಾಯಿಷಿ ನೀಡಿದ್ದು ಅದು ಸರಿಯಾದ, ತೃಪ್ತಿದಾಯಕವಾದ ಉತ್ತರ ಅಥವಾ ವಿವರಣೆ ಆಗಿರುವುದಿಲ್ಲ. ಸದರಿಯವರು ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟ ಬಗ್ಗೆ ದೂರುದಾರರ ಮತ್ತು ಎದುರುದಾರರ ಮಧ್ಯ ನಡೆದ ಸಂಭಾಷಣೆಯು ವಾಯ್ಸ್ ರೆಕಾರ್ಡರ್‌ನಲ್ಲಿ ಮೂಡಿ ಬಂದಿದ್ದು ಇರುತ್ತದೆ. ಸದರಿ ಸಂಭಾಷಣೆಯಲ್ಲಿಯ ಧ್ವನಿ ಎದುರುದಾರರದ್ದೆಂದು ಅವರ ಮೇಲಾಧಿಕಾರಿಯಾದ ಶ್ರೀ ಮಂಜುನಾಥ ಕರಿಯಪ್ಪ ಮಲ್ಲಕ್ಕನವರ, ಕಂದಾಯ ನಿರೀಕ್ಷಕರು, ಕೆರೂರು ಇವರು ಗುರುತಿಸಿರುತ್ತಾರೆ.

6) ತನಿಖಾಧಿಕಾರಿಯವರು ಸವಿಸ್ತಾರ ಜಪ್ತಿ ಪಂಚನಾಮೆ ಪೂರೈಸಿದ ನಂತರ ಎದುರುದಾರರನ್ನು ದಸ್ತಗಿರಿ ಮಾಡಿರುತ್ತಾರೆ.

7) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ದುರ್ನಡತೆಯನ್ನು ತೋರಿಸುತ್ತದೆ.

8) ಧ್ವನಿ ವಿಶ್ಲೇಷಣಾ ವರದಿ, ವಿಧಿ ವಿಜ್ಞಾನ ಪ್ರಯೋಗಾಲಯದಿಂದ ಬಂದಿರುವುದಿಲ್ಲ. ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೇ ಮಾಲುಗಳಲ್ಲಿ ಪಿನಾಪ್ತಲಿನ್ ಅಂಶ ಇರುವುದು ದೃಢಪಟ್ಟಿರುತ್ತದೆ.

9) ಎದುರುದಾರರಿಗೆ ದಿನಾಂಕ 19/09/2021 ರಂದು ಪರಿವೀಕ್ಷಣಾ ಟಿಪ್ಪಣಿಯನ್ನು ಕಳುಹಿಸಿದ್ದು ಅದಕ್ಕೆ ಸದರಿಯವರು ತಮ್ಮ ಸಮಜಾಯಿಷಿಯನ್ನು ದಿನಾಂಕ

30/11/2021 ರಂದು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಷಿಯನ್ನು ಪರಿಶೀಲಿಸಲಾಗಿ "ನಾನು ದೂರುದಾರರಾದ ಶ್ರೀ ದುರಗಪ್ಪ ತಂ. ದುರಗಪ್ಪ ವಡ್ಡರ ಅವರಿಗೆ ಯಾವುದೇ ಹಣದ ಬೇಡಿಕೆ ಇಟ್ಟಿರುವುದಿಲ್ಲ. ನಾನು ನನ್ನ ಕರ್ತವ್ಯವನ್ನು ಪ್ರಮಾಣಿಕತೆಯಿಂದಲೇ ಮಾಡಿರುವೆ. ನಾನು ದೂರುದಾರರಿಂದ ಹಣವನ್ನು ಕೂಡ ಪಡೆದುಕೊಂಡಿರುವುದಿಲ್ಲ. ನಾನು ನನ್ನ ಸಮಜಾಯಿಷಿಯಲ್ಲಿ ತಿಳಿಸಿದಂತೆ ನನ್ನನ್ನು ಪ್ರಕರಣದಲ್ಲಿ ಸಿಲಿಕಿಸುವ ಉದ್ದೇಶದಿಂದಲೇ ನನಗೆ ಆಗಿ ಬರದವರ ಮಾತು ಕೇಳಿ ದೂರುದಾರರು ಸುಳ್ಳು ಪಿರ್ಯಾದಿ ನೀಡಿ ಹಣವನ್ನು ನಾನು ಕೇಳದೇ ಇದ್ದರೂ ಕೂಡಾ ನನ್ನ ಟೇಬಲ್ ಮೇಲೆ ಇಟ್ಟಿದ್ದು, ನಂತರ ಎ.ಸಿ.ಬಿ. ಅಧಿಕಾರಿಗಳು ಆ ಹಣವನ್ನು ನನಗೆ ಕೊಡಲು ಕೇಳಿ ನಂತರ ಅದನ್ನು ನನ್ನಿಂದಲೇ ಪಡೆದುಕೊಂಡಿದ್ದರಿಂದ ನನ್ನ ಕೈಬೆರಳುಗಳು ದ್ರಾವಣದಲ್ಲಿ ತೊಳೆದಾಗ ಅವು ಕೆಂಪು ಗುಲಾಬಿ ಬಣ್ಣಕ್ಕೆ ಪರಿವರ್ತನೆಗೊಂಡಿರುತ್ತವೆ. ನನ್ನ ಮೇಲೆ ಸುಳ್ಳು ಪಿರ್ಯಾದಿ ಕೊಟ್ಟು ನನ್ನನ್ನು ಈ ಪ್ರಕರಣದಲ್ಲಿ ಸಿಲುಕಿಸಲಾಗಿದೆ" ಎಂದು ಎದುರುದಾರರು ಆಪಾದನೆಗಳನ್ನು ನಿರಾಕರಿಸಿರುವುದರ ಹೊರತಾಗಿ ಆಪಾದನೆಗಳನ್ನು ಅಲ್ಲಗೆಳೆಯಲು ಯಾವುದೇ ಪೂರಕ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ ಅವರು ನೀಡಿರುವ ಸಮಜಾಯಿಷಿ ಅಂಶಗಳ ಮೇರೆಗೆ ಪ್ರಕರಣವನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳು ಕಂಡುಬರುವುದಿಲ್ಲ.

10) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ, ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ, ರಾಸಾಯನಿಕ ತಜ್ಞರ ಪರೀಕ್ಷಾ ವರದಿ ಮತ್ತು ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೇ ಮಾಲುಗಳಲ್ಲಿ ಪಿನಾಪ್ತಲಿನ್ ಅಂಶ ಇವುಗಳನ್ನು ಪರಿಶೀಲಿಸಿದಾಗ ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

11) ಅದಲ್ಲದೆ ಎದುರುದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ) 2021 ನಿಯಮ 3 (1) (i ರಿಂದ iii) ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ

ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸಬೇಕೆಂದೂ ಕೋರಿದೆ.

12) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

31/1/22

**(ನ್ಯಾಯಮೂರ್ತಿ ಬಿ.ಎಸ್. ಪಾಟೀಲ್)**
ಉಪಲೋಕಾಯುಕ್ತರು
ಕರ್ನಾಟಕ ರಾಜ್ಯ, ಬೆಂಗಳೂರು.